PRAMC
EIC
SE-1
SE-2
DS
EE
AEE-1
AEE-2
AEE-3

## <u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: ಮೈಸೂರು ಜಿಲ್ಲೆ, ನಂಜನಗೂಡು ತಾಲ್ಲೂಕಿನ ಮೈಸೂರು-ಹದಿನಾರು ರಸ್ತೆ (ರಾಜ್ಯ ಹೆದ್ದಾರಿಯಾಗಿ ಮೇಲ್ದರ್ಜೆಗೇರಿಸಲಾಗಿದೆ) ಹಾಗೂ ಶಿರ-ನಂಜನಗೂಡು ರಸ್ತೆ (ರಾಜ್ಯ ಹೆದ್ದಾರಿ-84) ಗೆ ಸಂಪರ್ಕಿಸಲು ಹದಿನಾರು ಮತ್ತು ಸರಗೂರು ರಸ್ತೆಯ ಮಾರ್ಗವಾಗಿ ಕಬಿನಿ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಾಣ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ಕುರಿತು.

ಓದಲಾಗಿದೆ: ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಡಿಸಿಎಲ್ ರವರ ಪತ್ರ ಸಂಖ್ಯೆ: ಕರಅನಿನಿ/ವ್ಯನಿ/ಸೇತುವೆ ನಂಜನಗೂಡು/ವರುಣ/2022-23/1188, ದಿನಾಂಕ: 21-07-2022.

* * * * *

<u>ಪ್ರಸ್ತಾವನೆ:</u>

ಮೈಸೂರು ಜಿಲ್ಲೆ, ನಂಜನಗೂಡು ತಾಲ್ಲೂಕು, ವರುಣ ವಿಧಾನಸಭಾ ಕ್ಷೇತ್ರದ ಹದಿನಾರು ಗ್ರಾಮದಿಂದ ಸರಗೂರು ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಹಳ್ಳಿ ರಸ್ತೆಯಲ್ಲಿ ಕಬಿನಿ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಿಸಬೇಕಾಗಿರುತ್ತದೆ. ಸದರಿ ಸ್ಥಳದಲ್ಲಿ ಸೇತುವೆಯು ನಿರ್ಮಾಣವಾಗದ ಕಾರಣ ಸರಗೂರು, ನಗರ್ಲೆ ಮತ್ತು ಸುತ್ತೂರು ಮಾರ್ಗವಾಗಿ ಹದಿನಾರು ಗ್ರಾಮವನ್ನು ಸೇರಲು 15.00 ಕಿ.ಮೀ ಗಳ ಅಂತರ ಹೆಚ್ಚುವರಿಯಾಗಿರುತ್ತದೆ ಹಾಗೂ ಮುಳ್ಳೂರು, ಆಲಂಬೂರು, ಅನಿಯಂಬಳ್ಳಿ, ಗೋನಹಳ್ಳಿ, ಕಲ್ಮಳ್ಳಿ, ಬೊಕ್ಕಳ್ಳಿ, ಸರಗೂರು, ನಗರ್ಲೆ, ಮೂಡಳ್ಳಿ, ಹದಿನಾರು, ಇಮ್ಮಾವು, ಹುಳಿಮಾವು ಹೊರಳವಾಡಿ, ಆಯರಹಳ್ಳಿ, ದೇವಲಾಪುರ ಮತ್ತು ಇತರೆ ಗ್ರಾಮ ವಾಸಿಗಳಿಗೆ ಸಂಚರಿಸಲು ಅನುಕೂಲ ಮಾಡಿಕೊಡುವ ದೃಷ್ಟಿಯಿಂದ ಮೈಸೂರು ಜಿಲ್ಲೆ, ನಂಜನಗೂಡು ತಾಲ್ಲೂಕಿನ ವರುಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸರಗೂರು, ನಗರ್ಲೆ ಮತ್ತು ಹದಿನಾರು ಗ್ರಾಮದ ಮಾರ್ಗದಲ್ಲಿ ಹರಿಯುವ ಕಬಿನಿ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಾಣವು ಅಗತ್ಯವಾಗಿರುತ್ತದೆ.

ಮುಂದುವರೆದು, ಸದರಿ ಸೇತುವೆಯ ನಿರ್ಮಾಣದಿಂದ ಸಾರ್ವಜನಿಕರು ಪ್ರಮುಖ ನಗರ ಪ್ರದೇಶಗಳಿಗೆ ಸಂಪರ್ಕ ಸಾಧಿಸುವುದು, ದೈನಂದಿನ ವ್ಯಾಪಾರ, ಕೃಷಿ ಉತ್ಪನ್ನ ಸಾಗಾಟ, ಶೈಕ್ಷಣಿಕ ಅಭಿವೃದ್ಧಿ ಮತ್ತು ಸ್ಥಳೀಯರಿಗೆ ಸಕಾಲಕ್ಕೆ ವೈದ್ಯಕೀಯ ಚಿಕಿತ್ಸೆ ಪಡೆಯಲು ಅನುಕೂಲವಾಗುತ್ತದೆ. ಕಬಿನಿ ನದಿಯ ಪ್ರವಾಹ ಸಮಯದಲ್ಲಿ ಸಾರ್ವಜನಿಕರಿಗೆ ನಗರ ಪ್ರದೇಶಗಳಿಗೆ ಸಂಪರ್ಕ ಸಾಧಿಸುವುವಲ್ಲಿ ಅನುಕೂಲವಾಗಿರುತ್ತದೆ. ಆದ್ದರಿಂದ, ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಡಿಸಿಎಲ್ ರವರು ಸದರಿ ಸೇತುವೆಯನ್ನು ಕೆಆರ್‌ಡಿಸಿಎಲ್ ವತಿಯಿಂದ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡುವಂತೆ ಓದಲಾದ ಪತ್ರದಲ್ಲಿ ಕೋರಿರುತ್ತಾರೆ.

ಪ್ರಸ್ತಾಪಿತ ಸೇತುವೆ ಕಾಮಗಾರಿಯ ವಿವರ ಈ ಕೆಳಕಂಡಂತಿರುತ್ತದೆ:

| ಕ್ರ.ಸಂ | ಕಾಮಗಾರಿಯ ಹೆಸರು | ಅಂದಾಜು ಮೊತ್ತ (ರೂ.ಕೋಟಿಗಳಲ್ಲಿ) |
|---|---|---|
| 1. | ಮೈಸೂರು ಜಿಲ್ಲೆ, ನಂಜನಗೂಡು ತಾಲ್ಲೂಕಿನ ಮೈಸೂರು-ಹದಿನಾರು ರಸ್ತೆ (ರಾಜ್ಯ ಹೆದ್ದಾರಿಯಾಗಿ ಮೇಲ್ದರ್ಜೆಗೇರಿಸಲಾಗಿದೆ) ಹಾಗೂ ಶಿರ-ನಂಜನಗೂಡು ರಸ್ತೆ (ರಾಜ್ಯ ಹೆದ್ದಾರಿ-84) ಗೆ ಸಂಪರ್ಕಿಸಲು ಹದಿನಾರು ಮತ್ತು ಸರಗೂರು ರಸ್ತೆಯ ಮಾರ್ಗವಾಗಿ ಕಬಿನಿ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಾಣ ಕಾಮಗಾರಿ | 27.00 |

ಸದರಿ ಪ್ರಸ್ತಾವನೆಯನ್ನು ಸರ್ಕಾರದಲ್ಲಿ ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಈ ಕೆಳಕಂಡಂತೆ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಲೋಇ ಇ-266 ಇಎಪಿ 2022 ಬೆಂಗಳೂರು, ದಿನಾಂಕ: 17-12-2022**

ಮೈಸೂರು ಜಿಲ್ಲೆ, ನಂಜನಗೂಡು ತಾಲ್ಲೂಕಿನ ಮೈಸೂರು-ಹದಿನಾರು ರಸ್ತೆ (ರಾಜ್ಯ ಹೆದ್ದಾರಿಯಾಗಿ ಮೇಲ್ದರ್ಜೆಗೇರಿಸಲಾಗಿದೆ) ಹಾಗೂ ಶಿರ-ನಂಜನಗೂಡು ರಸ್ತೆ (ರಾಜ್ಯ ಹೆದ್ದಾರಿ-84) ಗೆ ಸಂಪರ್ಕಿಸಲು ಹದಿನಾರು ಮತ್ತು ಸರಗೂರು ರಸ್ತೆಯ ಮಾರ್ಗವಾಗಿ ಕಬಿನಿ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಾಣ ಕಾಮಗಾರಿಯನ್ನು ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಲೆಕ್ಕ ಶೀರ್ಷಿಕೆ 5054-80-190-0-01-132 ರಡಿ ರೂ.27.00 ಕೋಟಿಗಳ ಮೊತ್ತದಲ್ಲಿ ಕೈಗೊಳ್ಳಲು ಈ ಕೆಳಕಂಡ ಷರತ್ತಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

1. ಪ್ರಸ್ತಾಪಿತ ಕಾಮಗಾರಿಯು ಬೇರೆ ಯಾವುದೇ ಇಲಾಖೆಯ ಕಾರ್ಯಕ್ರಮಗಳ ಕ್ರಿಯಾ ಯೋಜನೆಯಲ್ಲಿ ಸೇರ್ಪಡೆಯಾಗದಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು ಹಾಗೂ ಲಭ್ಯವಿರುವ ಅನುದಾನದ ಮಿತಿಯೊಳಗೆ ಕಾಮಗಾರಿಗಳನ್ನು ಮುಕ್ತಾಯಗೊಳಿಸತಕ್ಕದ್ದು, ಯಾವುದೇ ಕಾರಣದಿಂದಲೂ ಹೆಚ್ಚುವರಿ ಅನುದಾನಕ್ಕೆ ಹಾಗೂ ಬದಲಿ ಕಾಮಗಾರಿಗೆ ಪ್ರಸ್ತಾವನೆ ಸಲ್ಲಿಸತಕ್ಕದ್ದಲ್ಲ.

2. ಯೋಜನೆಯಲ್ಲಿನ ಕಾಮಗಾರಿಗೆ ಅಂದಾಜನ್ನು ಸಿದ್ಧಪಡಿಸಿಕೊಂಡು ಸಕ್ಷಮ ಪ್ರಾಧಿಕಾರದ ತಾಂತ್ರಿಕ ಅನುಮೋದನೆಯೊಂದಿಗೆ ಕಾಮಗಾರಿಯನ್ನು ಕೈಗೊಳ್ಳತಕ್ಕದ್ದು ಹಾಗೂ ಅನುಮೋದಿತ ಕಾಮಗಾರಿಯನ್ನು ಲೋಕೋಪಯೋಗಿ ಇಲಾಖಾ ಸಂಹಿತೆ ಪ್ರಕಾರ ನಿರ್ವಹಿಸಲು ಕ್ರಮವಹಿಸತಕ್ಕದ್ದು.

3. ಕಾಮಗಾರಿಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪಾರದರ್ಶಕ ಅಧಿನಿಯಮ ಮತ್ತು ನಿಯಮಗಳ ಅಡಿಯಲ್ಲಿ ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ. ಸಿಆಸುಇ 2 ಸಂಗ್ರ 2009, ದಿನಾಂಕ: 09-10-2012 ರ ಪ್ರಕಾರ ಟೆಂಡರ್ ಕರೆದು ನಿರ್ವಹಣೆಗೆ ಕ್ರಮ ವಹಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ: ಆಇ 451 ಆಕೋ-2/2022 (ಇ-ಆಫೀಸ್), ದಿನಾಂಕ: 23-09-2022 ರನ್ವಯ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

17/12/2022
(ರಾಮಚಂದ್ರಪ್ಪ ಕೆ.ಎಸ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಬಾಹ್ಯ ಅನುದಾನಿತ ಯೋಜನೆಗಳು (ಇಎಪಿ)
ಲೋಕೋಪಯೋಗಿ ಇಲಾಖೆ

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು.

ಪ್ರತಿಯನ್ನು :-

1. ಮಹಾಲೇಖಪಾಲರು (ಅಕೌಂಟ್ಸ್) ಕರ್ನಾಟಕ, ಬೆಂಗಳೂರು.
2. ಸನ್ಮಾನ್ಯ ಮುಖ್ಯ ಮಂತ್ರಿಯವರ ಆಪರ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
6. ಸರ್ಕಾರದ ಮುಖ್ಯ ಕಾರ್ಯದರ್ಶಿ ರವರ ಜಂಟಿ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ವಿಧಾನ ಸೌಧ, ಬೆಂಗಳೂರು ರವರಿಗೆ ದಿನಾಂಕ 08-12-2022 ರಂದು ನಡೆದ ಸಚಿವ ಸಂಪುಟದ ಕಾರ್ಯಸೂಚಿ ಕ್ರಮ ಸಂಖ್ಯೆ. 21 ಹಾಗೂ ಪ್ರಕರಣ ಸಂಖ್ಯೆ. ಸಿ:647/2022 ರನ್ವಯ ಹೊರಡಿಸಿ ಸಲ್ಲಿಸಲಾಗಿದೆ.
7. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ, (ಆರ್ಥಿಕ ಕೋಶ) ಲೋಕೋಪಯೋಗಿ ಇಲಾಖೆ, ವಿಧಾನಸೌಧ, ಬೆಂಗಳೂರು.
8. ಆಂತರಿಕ ಆರ್ಥಿಕ ಸಲಹೆಗಾರರು, ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಸರ್ಕಾರದ ಉಪಕಾರ್ಯದರ್ಶಿ, (ಸಂ ಮತ್ತು ಕ), ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
11. ಜಂಟಿ ನಿರ್ದೇಶಕರು, ಸ್ಟೇಟ್ ಹುಜೂರು ಟ್ರೆಷರಿ, ಕೆ.ಆರ್ ಸರ್ಕಲ್, ಬೆಂಗಳೂರು.
12. ಪ್ರಧಾನ ಇಂಜನಿಯರ್, PRAMC, ಲೋಕೋಪಯೋಗಿ ಇಲಾಖೆ, ಕೆ.ಆರ್ ವೃತ್ತ, ಬೆಂಗಳೂರು ರವರಿಗೆ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
13. ಕಡತ / ಹೆಚ್ಚುವರಿ ಪ್ರತಿಗಳು.